# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಹಿರಿಯೂರು

## ಸಿ.ಸಿ ಸಂಖ್ಯೆ: 715/2023

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಮಹಲಿಂಗಪ್ಪ | ಸಿಡಬ್ಲ್ಯೂ-5 |
| ತಂದೆಯ/ಗಂಡನ ಹೆಸರು | - | ನಿಂಗಪ್ಪ | ಪಿಡಬ್ಲ್ಯೂ-8 |
| ವಯಸ್ಸು | - | ಸು.50 ವರ್ಷ | ಪ್ರ.ವ.ಬೋ<br>ದಿನಾಂಕ:30.07.2025 |
| ಉದ್ಯೋಗ | - | ವ್ಯವಸಾಯ | |
| ವಾಸ | - | ಶಿವಗಂಗ ಗ್ರಾಮ | |

**ಮುಖ್ಯ ವಿಚಾರಣೆ: ಮಾನ್ಯ ಎಪಿಪಿಯವರಿಂದ:-**

1. ಚಾಸಾ-1 ರಿಂದ 4, 6 ರಿಂದ 8 ರವರ ಪರಿಚಯ ಇರುತ್ತಾರೆ. ಆರೋಪಿತರು ಪರಿಚಯ ಇರುತ್ತಾರೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಗಲಾಟೆಯನ್ನು ನೋಡಿರುವುದಿಲ್ಲ ಮತ್ತು ಬಿಡಿಸಿರುವುದಿಲ್ಲ. ನಾನು ಪೊಲೀಸ್‌ರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ-ಸವಾಲಿನಲ್ಲಿ ಕೇಳುವ ಪ್ರಶ್ನೆಗಳನ್ನು ಕೇಳಲು ಅನುಮತಿ ನೀಡಲಾಯಿತು).

**ಪಾಟೀ-ಸವಾಲು: ಮಾನ್ಯ ಎಪಿಪಿಯವರಿಂದ:-**

2. ದಿನಾಂಕ:11.02.2023 ರಂದು ರಾತ್ರಿ 8.20 ಗಂಟೆ ಸಮಯದಲ್ಲಿ ನಾನು ನಮ್ಮ ಮನೆ ಹತ್ತಿರ ಇರುವಾಗ ಚಾಸಾ-1 ರವರ ಮನೆಯ ಹತ್ತಿರ ಚಾಸಾ-1 ಮತ್ತು ಆರೋಪಿತರ ನಡುವೆ ಜಗಳ ನಡೆಯುತ್ತಿತ್ತು ಎಂದರೆ ಸರಿಯಲ್ಲ. ನಾನು ಅಲ್ಲಿಗೆ ಹೋಗಿ ನೋಡಿದಾಗ ಆರೋಪಿತರು ಚಾಸಾ-1 ಮತ್ತು 2 ರವರಿಗೆ ಸೂಳೆಮಕ್ಕಳಾ ಬೋಳಿಮಕ್ಕಳಾ ಎಂದು ಅವಾಚ್ಯವಾಗಿ ಬೈಯ್ಯುತ್ತಿದ್ದರು ಎಂದರೆ ಸರಿಯಲ್ಲ. 1 ನೇ ಆರೋಪಿ ನ್ಯಾಯಾಲಯದ ಮುಂದೆ ಇರುವ ಹಾರೆ ಕೋಲಿನಿಂದ ಚಾಸಾ-1 ರವರ

ತಲೆಗೆ ಹೊಡೆದರು ಎಂದರೆ ಸರಿಯಲ್ಲ. ಜಗಳ ಬಿಡಿಸಲು ಬಂದ ಚಾಸಾ–2 ರವರ ಸೀರೆಯನ್ನು 1 ನೇ ಆರೋಪಿ ಹಿಡಿದು ಎಳೆದಾಡಿ ಕೈಕಾಲುಗಳಿಂದ ಹೊಡೆದರು ಎಂದರೆ ಸರಿಯಲ್ಲ. ನಂತರ ಜಗಳ ಬಿಡಿಸಲು ಬಂದ ಚಾಸಾ–3 ಮತ್ತು 4 ರವರಿಗೂ ಸಹ ಉಳಿದ ಆರೋಪಿತರು ಕೈಕಾಲುಗಳಿಂದ ಮೈಕೈಗೆ ಹೊಡೆದರು ಎಂದರೆ ಸರಿಯಲ್ಲ. ನಂತರ ನಾನು ಮತ್ತು ಚಾಸಾ–6 ರವರು ಜಗಳ ಬಿಡಿಸಿದೆವು ಎಂದರೆ ಸರಿಯಲ್ಲ. ಆರೋಪಿತರು ಚಾಸಾ–1 ರಿಂದ 4 ರವರಿಗೆ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈ ಬಗ್ಗೆ ಈಗ ಮೇಲೆ ಓದಿ ಹೇಳಿದಂತೆ ದಿನಾಂಕಃ12.02.2023 ರಂದು ಪೊಲೀಸ್‌ರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು **ನಿಪಿ–9** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ–ಸವಾಲುಃ ಆರೋಪಿ ಪರ ಶ್ರೀ ವೈ.ಆರ್.ಕೆ. ವಕೀಲರು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಸಿ/ಸಿ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.